**OCTOBER 11, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಬೆಂಗಳೂರು ಸಮರ್ಪಕ** ಅಭಿವೃದ್ಧಿಗಾಗಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಸ್ತಿತ್ವಕ್ಕೆ:ಮುಖ್ಯಮಂತ್ರಿ

- **ಕೃಷಿ ವಿಸ್ತರಣಾ ಕಾರ್ಯಚಟುವಟಿಕೆಗಳನ್ನು** ಉತ್ತೇಜಿಸಲು ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಸರ್ಕಾರದ ಚಿಂತನೆ.

- **ಕೇಂದ್ರ ಪುರಸ್ಕೃತ ಯೋಜನೆಗಳ** ಸಮರ್ಪಕ ಅನುಷ್ಠಾನ: ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಿದ ಸಂಸದ ಶೆಟ್ಟರ್.

- **ರಾಷ್ಟ್ರೀಯ ಮಹಿಳಾ** ಆಯೋಗದಿಂದ ಇದೇ '13 ಮತ್ತು 14 ರಂದು, ಬೆಂಗಳೂರಿನಲ್ಲಿ 'ಅಪ್ ಕೇ ದ್ವಾರ್–ಮಹಿಳಾ ಜನ್ ಸುನ್ವಾಹಿ' ಕಾರ್ಯಕ್ರಮ

*******

**ಬೆಂಗಳೂರು ನಗರದ** ಸುಗಮ ಆಡಳಿತ, ಸಮರ್ಪಕ ಅಭಿವೃದ್ಧಿಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದು ಐದು ಪಾಲಿಕೆಗಳು ರಚನೆಯಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೊದಲ ಸಭೆಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಜನಸಂಖ್ಯೆ 1ಕೋಟಿ 40 ಲಕ್ಷ ತಲುಪಿದೆ. ಒಂದು ಕಾರ್ಪೋರೇ ’ನ್ ನಿಂದ ಇ ್ಟ ದೊಡ್ಡ ನಗರದ ಸಮರ್ಪಕ ಅಭಿವೃದ್ಧಿ ದೊಡ್ಡ ಸವಾಲು. ಒಂದಕ್ಕಿಂತ ಹೆಚ್ಚು ಕಾರ್ಪೋರೇ ’ನ್‌ಗಳಿದ್ದರೆ ಅಭಿವೃದ್ಧಿ ಸಾಧ್ಯ ಎನ್ನುವ ಕಾರಣಕ್ಕೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದು 5 ಮಹಾನಗರ ಪಾಲಿಕೆಗಳ ರಚನೆಯಾಗಿವೆ ಎಂದರು. ಸುಗಮ ಕಸ ವಿಲೇವಾರಿ, ಪಾಲಿಕೆಗಳ ಆದಾಯ ಹೆಚ್ಚಳ, ಸಂಚಾರ ದಟ್ಟಣೆ ನಿವಾರಣೆ, ನಗರವನ್ನು ಚೊಕ್ಕವಾಗಿಡುವುದು. ರಸ್ತೆ, ಚರಂಡಿ, ಪಾದಚಾರಿ ಮಾರ್ಗ, ಉದ್ಯಾನ ನಿರ್ಮಾಣಕ್ಕೆ ಆದ್ಯತೆ ನೀಡಿ ಮಾದರಿ ಪಾಲಿಕೆಗಳನ್ನಾಗಿ ರೂಪಿಸಬೇಕು ಎನ್ನುವ ಮಹತ್ತರ ಗುರಿ ಮತ್ತು ಉದ್ದೇಶಗಳೊಂದಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

*******

**ಜಲ ಮಾಲಿನ್ಯ ಹೆಚ್ಚುತ್ತಿರುವ** ಪ್ರಸಕ್ತ ಸನ್ನಿವೇಶದಲ್ಲಿ ಜಲ ಮೂಲಗಳಲ್ಲಿ ನೀರಿನ ಗುಣಮಟ್ಟ ಮತ್ತು ಜಲ ಶುದ್ಧೀಕರಣ ಘಟಕಗಳ ಕಾರ್ಯಕ್ಷಮತೆಯ ಪರೀಕ್ಷೆ ನಡೆಸಬೇಕು ಎಂದು ಪರಿಸರ ಇಲಾಖೆ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬಳ್ಳಾರಿಯಲ್ಲಿ ಆಯೋಜನೆಗೊಂಡಿದ್ದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೈಗಾರಿಕೆಗಳ ರಾಸಾಯನಿಕ ತ್ಯಾಜ್ಯ, ಬಹುಮಹಡಿ ಕಟ್ಟಡಗಳ ಸಂಸ್ಕರಿಸದ ಮಲತ್ಯಾಜ್ಯ ಕೆರೆ, ಕಟ್ಟೆ, ನದಿ, ಸರೋವರ ಸೇರುತ್ತಿದ್ದು ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ ಎಂದರು.

*******

**ಕೃಷಿ ವಿಸ್ತರಣೆ ಮತ್ತು ಶೈಕ್ಷಣಿಕ ಚಟುವಟಿಕೆಗಳನ್ನು** ಪ್ರೋತ್ಸಾಹಿಸಲು, ಕೃಷಿ ವಿಶ್ವವಿದ್ಯಾಲಯಗಳಿಗೆ ಪೂರಕವಾಗಿ ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಸರ್ಕಾರ ಮುಂದಾಗಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಧಾರವಾಡ ಕೃಷಿ ವಿಶ್ವವಿದ್ಯಾಲಯದ 39 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದ ಅವರು, ಕೃಷಿ ಕ್ಷೇತ್ರದಲ್ಲಿ ಸಂಶೋಧನೆ

ಹಾಗೂ ಕೃಷಿ ವಿಸ್ತರಣಾ ಕಾರ್ಯಚಟುವಟಿಕೆಗಳನ್ನು ಉತ್ತೇಜಿಸಲು ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳು ನಿರಂತರವಾಗಿ ಶ್ರಮಿಸುತ್ತಿವೆ ಎಂದರು. ಇದೇ ಪ್ರಥಮ ಬಾರಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಿಂದ ಖಾಸಗಿ ಕೃಷಿ ಮಹಾವಿದ್ಯಾಲಯ ಆರಂಭಿಸಲು ಕೆ.ಎಲ್.ಇ. ಸಂಸ್ಥೆಗೆ ಅನುಮೋದನೆ ನೀಡಿದ್ದು, ಸವದತ್ತಿ ತಾಲ್ಲೂಕಿನ ತೆನಿಕೊಳ್ಳ ಗ್ರಾಮದಲ್ಲಿ ಮಹಾವಿದ್ಯಾಲಯ ಪ್ರಾರಂಭವಾಗಲಿದೆ.

*******

**ಪ್ರಾಮಾಣಿಕ, ಪಾರದರ್ಶಕ ಹಾಗೂ** ಸೇವಾ ಮನೋಭಾವದ ಜೊತೆಗೆ ಕಾನೂನಿನ ಅರಿವಿನೊಂದಿಗೆ ಸಹಕಾರಿಗಳು ಕೆಲಸ ಮಾಡಬೇಕು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ವಿಜಯಪುರದಲ್ಲಿ ನಡೆದ ಸಹಕಾರಿ ಕಾಯ್ದೆಗಳಿಗೆ ತಿದ್ದುಪಡಿ, ಅಭಿವೃದ್ಧಿ ಹಾಗೂ ಎದುರಿಸುತ್ತಿರುವ ಸವಾಲುಗಳ ಸಮಾಲೋಚನೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸಹಕಾರಿ ರಂಗದ ಬಲವರ್ಧನೆಗೆ ಸರ್ಕಾರಗಳು ಮೇಲಿಂದ ಮೇಲೆ ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳುತ್ತವೆ. ಸರ್ಕಾರದ ನಿಯಮಗಳ ಪಾಲನೆಯೊಂದಿಗೆ ಸಹಕಾರಿ ಬಲವರ್ಧನೆಗೆ ಎಲ್ಲರೂ ಶ್ರಮಿಸಬೇಕಿದೆ ಎಂದು ಅವರು ಹೇಳಿದರು.

*******

**ಚಿಂತಾಮಣಿ ವಿಧಾನಸಭಾ** ಕ್ಷೇತ್ರದಲ್ಲಿ ಕೈಗಾರಿಕಾ ಅಭಿವೃದ್ಧಿಗೆ ಒತ್ತು ನೀಡಲಾಗಿದ್ದು, ಅದಕ್ಕೆ ಪೂರಕವಾಗಿ ಕ್ಷೇತ್ರದ ಎಲ್ಲಾ ರಸ್ತೆಗಳನ್ನು ಆದ್ಯತೆಯ ಮೇಲೆ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ತಾಲ್ಲೂಕಿನ ಸಿದ್ದೇಪಲ್ಲಿ ಕ್ರಾಸ್‌ನಲ್ಲಿ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈಗಾಗಲೇ ಚಿಂತಾಮಣಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿದ್ದು, 150 ಕೋಟಿ ರೂಪಾಯಿ ವೆಚ್ಚದಲ್ಲಿ ಆರಂಭಗೊಳ್ಳಲಿದೆ. ಸರ್ಕಾರಿ ಪಾಲಿಟೆಕ್ನಿಕ್ 75 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿದ್ದು, ಈಗಾಗಲೇ 50 ಕೋಟಿ ರೂಪಾಯಿ ಬಿಡುಗಡೆಯಾಗಿ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

*******

**ಉದ್ಯೋಗಸ್ಥ ಮಹಿಳೆಯರಿಗೆ** ವೇತನ ಸಹಿತ 'ಋತುಚಕ್ರರಜೆ'ಗೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿರುವುದು ಸ್ವಾಗತಾರ್ಹ. ಇದನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಸಿಕ ಋತುಚಕ್ರದ ರಜೆ ನೀತಿಯನ್ನು ಜಾರಿಗೆ ತರಲು ನಿರ್ಧರಿಸಿರುವುದು ಒಳ್ಳೆಯ ಕ್ರಮವಾಗಿದ್ದು, ಇದು ಬರೀ ಸರ್ಕಾರಿ ನೌಕರರಿಗೆ ಅ ್ಟೇ ಅಲ್ಲದೇ, ಎಲ್ಲ ಖಾಸಗಿ ವಲಯದ ಉದ್ಯೋಗಿಗಳಿಗೂ ಅನ್ವಯವಾಗಬೇಕು. ಈ ನೀತಿಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಎಲ್ಲ ಉದ್ಯೋಗದಾತರಿಗೆ ಸೂಚಿಸಬೇಕು ಎಂದು ಅವರು ಹೇಳಿದರು.

*******

**ಕೇಂದ್ರ ಸರ್ಕಾರದ ಪುರಸ್ಕೃತ** ಯೋಜನೆಗಳು ಜಿಲ್ಲಾ ಮಟ್ಟದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕಿದೆ. ಯೋಜನೆಗಳ ಅನುಷ್ಠಾನಕ್ಕೆ ಅಧಿಕಾರಿಗಳು ವಿಶೇಷ ಕಾಳಜಿ ವಹಿಸಬೇಕು ಎಂದು ಸಂಸದ ಜಗದೀಶ ಶೆಟ್ಟರ್ ಸೂಚಿಸಿದ್ದಾರೆ. ಬೆಳಗಾವಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಸಕ್ತ ಸಾಲಿನ ದಿಶಾ ಸಭೆಯಲ್ಲಿ ಮಾತನಾಡಿದ ಅವರು, ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರಿದರೆ ಅಂಥ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಕೆರೆ ಮತ್ತು ಉದ್ಯಾನವನಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಕಾಲಕಾಲ ಅನುದಾನ ಬಿಡುಗಡೆಯಾಗುತ್ತಿದೆ. ಇದಕ್ಕೆ ಸಂಬಂಧಪಟ್ಟ ಕ್ರಿಯಾಯೋಜನೆ ರೂಪಿಸಿ ಆದಷ್ಟು ಬೇಗ ಟೆಂಡರ ಕರೆದು ಕಾಲಮಿತಿಯೊಳಗೆ ಕಾಮಗಾರಿಗಳು ಪೂರ್ಣಗೊಳಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

*******

**ಸಮಗ್ರ ಕೃಷಿ ಅಭಿವೃದ್ಧಿಗೆ** ಪ್ರಧಾನಿ ನರೇಂದ್ರ ಮೊದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಪ್ರಧಾನ ಮಂತ್ರಿ ಧನ್‌ಧಾನ್ಯ ಕೃಷಿ ಯೋಜನೆ ರೂಪಿಸಿದ್ದು, ರಾ ್ಟ್ರದ 100 ಜಿಲ್ಲೆಯಲ್ಲಿ ಇದು ಅನು ್ಠಾನವಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಆ ಪೈಕಿ ಹಾವೇರಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಗದಗ ಮತ್ತು ಹಾವೇರಿ ಜಿಲ್ಲೆ ಸೇರ್ಪಡೆಯಾಗಿವೆ. ಈ

ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಅವರಿಗೆ ಬಸವರಾಜ ಬೊಮ್ಮಾಯಿ ಅಭಿನಂದನೆ ಸಲ್ಲಿಸಿದ್ದಾರೆ.

*******

**ದೇಶಾದ್ಯಂತ 60 ದಿನಗಳ** ತಂಬಾಕು ಮುಕ್ತ ಯುವ ಅಭಿಯಾನ 3 ನೇ ಹಂತ ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಾದ್ಯಂತ ಶಾಲಾ, ಕಾಲೇಜು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ವಿರೋಧಿ ಜಾಗೃತಿ ಕಾರ್ಯಕ್ರಮಗಳು ಆಯೋಜಿತವಾಗಿವೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಜಿಲ್ಲಾ ಆರೋಗ್ಯ ಅಧಿಕಾರಿ ಡಾಕ್ಟರ ಹೆಚ್.ಎನ್ ಹೊನಕೇರಿ

*******

**ಬೆಂಗಳೂರಿನ ಸುಧಾರಣಾ** ಸಂಸ್ಥೆಗಳ ಸಂಕೀರ್ಣದ ಸಂಭ್ರಮ ಸಭಾಂಗಣದಲ್ಲಿ ಇದೇ 13 ಮತ್ತು 14 ರಂದು ರಾಷ್ಟ್ರೀಯ ಮಹಿಳಾ ಆಯೋಗ 'ಅಪ್ ಕೇ ದ್ವಾರ್–ಮಹಿಳಾ ಜನ್ ಸುನ್ವಾಹಿ' ಕಾರ್ಯಕ್ರಮ ಆಯೋಜಿಸಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷರಾದ ವಿಜಯ ರಾಹತ್‌ಕರ್ ವಹಿಸಲಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಗೆ ಸಂಬಂಧಿಸಿದ ಮಹಿಳೆಯರಿಂದ ಸಲ್ಲಿಕೆಯಾದ ಮತ್ತು ಸಲ್ಲಿಸಲ್ಪಡುವ ದೂರುಗಳ ವಿಚಾರಣೆ ನಡೆಯಲಿದೆ.

*******

**ಹುಬ್ಬಳ್ಳಿಯ ಮಜೇಥಿಯಾ ಫೌಂಡೇಷನ್ ವತಿಯಿಂದ, ಇಂದು ಬೆಳಿಗ್ಗೆ** 11 ಗಂಟೆಗೆ, ಹುಬ್ಬಳ್ಳಿಯ ನವನಗರದ ಕ್ಯಾನ್ಸರ್ ಆಸ್ಪತ್ರೆಯ ರಮಿಲಾ ಪ್ರಶಾಂತಿ ಮಂದಿರದಲ್ಲಿ, ವಿಶ್ವ ಹಾಸ್ಪೈಸ್, ಪ್ಯಾಲಿಯೇಟಿವ್ ಕೇರ್ ದಿನ ಆಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯ ಕ್ಯಾನ್ಸರ್ ರೋಗ ತಜ್ಞರಾದ ಪದ್ಮಶ್ರೀ ಡಾಕ್ಟರ್ ವಿಜಯಲಕ್ಷ್ಮೀ ದೇಶಮಾನೆ ಅವರು, ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

*******

**ರಾಜ್ಯ ಹಿಂದುಳಿದ ವರ್ಗಗಳ** ಆಯೋಗದ ವತಿಯಿಂದ ರಾಜ್ಯದ್ಯಂತ ನಡೆಯುತ್ತಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಚಾಮರಾಜನಗರ ಜಿಲ್ಲೆ ಶೇಕಡ 98.21 ರ ಷ್ಟು ಪ್ರಗತಿ ಸಾಧಿಸುವ ಮೂಲಕ ರಾಜ್ಯದಲ್ಲಿ ಮೊದಲ ಸ್ಥಾನದಲ್ಲಿದೆ.ಸಮೀಕ್ಷಾ ಕಾರ್ಯ ಸೆಪ್ಟೆಂಬರ್ 22 ರಿಂದ ಪ್ರಾರಂಭವಾಗಿದ್ದು, ಈ ಸಮೀಕ್ಷೆಯಲ್ಲಿ ಚಾಮರಾಜನಗರ ತಾಲ್ಲೂಕು ಶೇಕಡಾ 99.15, ಗುಂಡ್ಲುಪೇಟೆ ತಾಲ್ಲೂಕು 97.41, ಕೊಳ್ಳೇಗಾಲ ತಾಲ್ಲೂಕು 94.66, ಯಳಂದೂರು ಹಾಗೂ ಹನೂರು ತಾಲ್ಲೂಕಿನಲ್ಲಿ ಶೇ. 100 ರ ಷ್ಟು ಸಮೀಕ್ಷಾ ಕಾರ್ಯ ಪೂರ್ಣಗೊಳಿಸಲಾಗಿದೆ.

*******

**ಕರ್ನಾಟಕ ರಾಜ್ಯ ಹಿಂದುಳಿದ** ವರ್ಗಗಳ ಆಯೋಗದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಪ್ರಗತಿಯಲ್ಲಿದ್ದು, ಈವರೆಗೆ 7 ಲಕ್ಷದ 65 ಸಾವಿರ ಮನೆಗಳ ಸಮೀಕ್ಷೆ ಪೂರ್ಣಗೊಳಿಸಲಾಗಿದೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಬೆಂಗಳೂರು ಸಮರ್ಪಕ** ಅಭಿವೃದ್ಧಿಗಾಗಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಸ್ತಿತ್ವಕ್ಕೆ: ಮುಖ್ಯಮಂತ್ರಿ

**ಕೃಷಿ ವಿಸ್ತರಣಾ ಕಾರ್ಯಚಟುವಟಿಕೆಗಳನ್ನು** ಉತ್ತೇಜಿಸಲು ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಸರ್ಕಾರದ ಚಿಂತನೆ–ಕೃಷಿ ಸಚಿವರು.

**ಕೇಂದ್ರ ಪುರಸ್ಕೃತ ಯೋಜನೆಗಳ** ಸಮರ್ಪಕ ಅನುಷ್ಠಾನ: ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಿದ ಸಂಸದ ಶೆಟ್ಟರ್.

**ರಾಷ್ಟ್ರೀಯ ಮಹಿಳಾ** ಆಯೋಗದಿಂದ ಇದೇ '13 ಮತ್ತು 14 ರಂದು, ಬೆಂಗಳೂರಿನಲ್ಲಿ 'ಅಪ್ ಕೇ ದ್ವಾರ್–ಮಹಿಳಾ ಜನ್ ಸುನ್ವಾಹಿ' ಕಾರ್ಯಕ್ರಮ

****END****